# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 73 (715) |
| ಸದಸ್ಯರ ಹೆಸರು | ಶ್ರೀ ಚಿದಾನಂದ್ ಎಂ ಗೌಡ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 22-07-2024 |
| ಉತ್ತರಿಸಬೇಕಾದ ಸಚಿವರು | ಉನ್ನತ ಶಿಕ್ಷಣ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| ಅ) | 2021ರ ಸಹಾಯಕ ಪ್ರಾಧ್ಯಾಪಕರ ನೇಮಕಾತಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವ ಪ್ರಕ್ರಿಯೆಯು ಯಾವ ಹಂತದಲ್ಲಿದೆ; | ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ 1242 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ವಿಶೇಷ ನೇಮಕಾತಿ ನಿಯಮಾವಳಿಗಳನ್ನು ರೂಪಿಸಿ, ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/257/ ಡಿಸಿಇ/2019(ಭಾ-3), ದಿನಾಂಕ:08.07.2020 ಮತ್ತು ತಿದ್ದುಪಡಿ ಅಧಿಸೂಚನೆ ದಿನಾಂಕ:19.10.2020 ರಲ್ಲಿ ಪ್ರಕಟಿಸಲಾಗಿದೆ.<br><br>ಸದರಿ ವಿಶೇಷ ನೇಮಕಾತಿ ನಿಯಮಗಳನ್ವಯ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಭರ್ತಿ ಮಾಡಲು ಸರ್ಕಾರವು ದಿನಾಂಕ:26.08.2021 ರ ಸಂಖ್ಯೆ: ಇಡಿ/257/ ಡಿಸಿಇ/2019 ರಲ್ಲಿ ಅಧಿಸೂಚನೆ ಹೊರಡಿಸಿದೆ. ಸದರಿ ಸರ್ಕಾರಿ ಅಧಿಸೂಚನೆಯನ್ವಯ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ದಿನಾಂಕ: 30.09.2021 ರಂದು ಈಗಾಗಲೇ ಅಧಿಸೂಚನೆ ಹೊರಡಿಸಿದ್ದು, ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಿ, ಆಯ್ಕೆಯಾದ 1208 ಅಭ್ಯರ್ಥಿಗಳ ಅಂತಿಮ ಆಯ್ಕೆ ಪಟ್ಟಿಯನ್ನು ಸರ್ಕಾರಕ್ಕೆ ಸಲ್ಲಿಸಿದ್ದು, ಈ ಅಂತಿಮ ಆಯ್ಕೆ ಪಟ್ಟಿಯನ್ನು ಸರ್ಕಾರದ ದಿನಾಂಕ: 03.11.2023 ರ ಅಧಿಸೂಚನೆ ಸಂಖ್ಯೆ: ಇಡಿ 92 ಡಿಸಿಇ 2023(ಇ) ರಲ್ಲಿ ಪ್ರಕಟಿಸಿರುತ್ತದೆ.<br><br>ಅಂತಿಮ ಆಯ್ಕೆ ಪಟ್ಟಿಯಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಆಯ್ಕೆಯಾಗಿರುವ 1208 ಅಭ್ಯರ್ಥಿಗಳ ನೇಮಕಾತಿ ಅರ್ಹತೆಗೆ ಸಂಬಂಧಿಸಿದಂತೆ, ಸರ್ಕಾರದ ಪತ್ರಸಂಖ್ಯೆ: ಇಡಿ 92 ಡಿಸಿಇ 2023(ಇ), ದಿನಾಂಕ: 06.11.2023 ರಲ್ಲಿ ನೀಡಿರುವ ನಿರ್ದೇಶನದನ್ವಯ ಅವರ ವಿದ್ಯಾರ್ಹತೆ, ಮೀಸಲಾತಿ ಇನ್ನಿತರ ಅಗತ್ಯ ದಾಖಲೆಗಳ ಬಗ್ಗೆ ಸಕ್ಷಮ ಪ್ರಾಧಿಕಾರಗಳಿಂದ ನೈಜತೆ ವರದಿಗಳನ್ನು ಪಡೆಯಲು ಕ್ರಮವಹಿಸಲಾಗಿದೆ. ಅದರಂತೆ, ಅಗತ್ಯ ದಾಖಲಾತಿಗಳ ಪರಿಶೀಲನಾ ಪ್ರಕ್ರಿಯೆ ಪೂರ್ಣಗೊಂಡ ಒಟ್ಟು 1097 ಸಹಾಯಕ ಪ್ರಾಧ್ಯಾಪಕ ಅಭ್ಯರ್ಥಿಗಳ ವರದಿ ಸ್ವೀಕೃತವಾಗಿರುತ್ತದೆ.<br><br>ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಸುತ್ತೋಲೆ ಸಂಖ್ಯೆ:ಸಿಆಸುಇ/03/ಹೈಕಕೋ/2019, ದಿನಾಂಕ: 01.02.2023 ರಲ್ಲಿ ಕಲ್ಯಾಣ-ಕರ್ನಾಟಕ ಪ್ರದೇಶದ ಸ್ಥಳೀಯ ವ್ಯಕ್ತಿಗಳಿಗೆ ಮೀಸಲಿರಿಸಿರುವ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವಲ್ಲಿ ವಿವಿಧ ನೇಮಕಾತಿ ಪ್ರಾಧಿಕಾರಗಳು ಪಾಲಿಸಬೇಕಾದ ವಿಧಿ-ವಿಧಾನಗಳ ಬಗ್ಗೆ ತಿಳಿಸುತ್ತಾ, ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸದೇ ಇದ್ದಲ್ಲಿ ಅಂತಹ ನೇಮಕಾತಿ ಪ್ರಕ್ರಿಯೆಗಳಲ್ಲಿ ಮೆರಿಟ್ ಪಟ್ಟಿಯಿಂದ ಆಯ್ಕೆ ಪಟ್ಟಿ ತಯಾರಿಸುವಲ್ಲಿ ಸ್ಥಳೀಯ ಅಭ್ಯರ್ಥಿಗಳನ್ನು ಮೊದಲಿಗೆ ಮಿಕ್ಕುಳಿದ ವೃಂದದಲ್ಲಿ ಲಭ್ಯವಿರುವ ಹುದ್ದೆಗಳಿಗೆದುರಾಗಿ ಪರಿಗಣಿಸಿ ಆಯ್ಕೆ ಪಟ್ಟಿ ತಯಾರಿಸುವುದು. ನಂತರ ಸ್ಥಳೀಯ ವೃಂದದಲ್ಲಿ ಲಭ್ಯವಿರುವ ಹುದ್ದೆಗಳಿಗೆ ಪರಿಗಣಿಸಿ ಆಯ್ಕೆ ಪಟ್ಟಿ ತಯಾರಿಸುವಂತೆ ಸೂಚಿಸಲಾಗಿರುತ್ತದೆ. |
| ಆ) | ಆಯ್ಕೆ ಪಟ್ಟಿ ಪ್ರಕಟಣೆಯಾಗಿ, ದಾಖಲೆಗಳ ಪರಿಶೀಲನೆ ಬಹುತೇಕ ಪೂರ್ಣಗೊಂಡಿದ್ದರೂ ಸಹ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲು ವಿಳಂಬ ಮಾಡುತ್ತಿರಲು ಕಾರಣವೇನು; | |
| ಇ) | ಹೈದ್ರಾಬಾದ್-ಕರ್ನಾಟಕ ವಿಭಾಗದ ಮೀಸಲಾತಿ ವಿಷಯವಾಗಿ ಬಂದಂತಹ ಕರ್ನಾಟಕ ಸರ್ಕಾರದ ಸುತ್ತೋಲೆಯನ್ನು ಕರ್ನಾಟಕ ಆಡಳಿತ ನ್ಯಾಯ ಮಂಡಳಿ ಎತ್ತಿಹಿಡಿದಿದ್ದು, ಇದೇ ವಿಷಯವಾಗಿ ಉಚ್ಚ ನ್ಯಾಯಾಲಯವು ಸಹ ಮಧ್ಯಂತರ ತೀರ್ಪು ನೀಡಿ ಕೌನ್ಸಿಲಿಂಗ್ ನಡೆಸಿ ಸ್ಥಳ ನಿಯುಕ್ತಿಗೊಳಿಸಬಹುದು ಎಂದ ತೀರ್ಪು ನೀಡಿದ್ದರೂ ಸಹ ಸರ್ಕಾರ ನೇಮಕಾತಿ ಆದೇಶ ನೀಡಲು ವಿಳಂಬ ಮಾಡುತ್ತಿರಲು ಕಾರಣಗಳೇನು; | |
| ಈ) | ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ/03/ಹೈಕಕೋ/2019, ದಿನಾಂಕ:01.02.2023ರ ಆಧಾರದ ಮೇಲೆ ಈಗಾಗಲೇ ಇತರ ಇಲಾಖೆಗಳು ಪರತ್ತುಬದ್ಧ ನೇಮಕಾತಿ ಆದೇಶ ಮತ್ತು ತಾತ್ಕಾಲಿಕ ಸ್ಥಳ ನಿಯುಕ್ತಿ ಮಾಡಿ ಆದೇಶ ಮಾಡಿದ್ದರೂ ಸಹಾಯಕ ಪ್ರಾಧ್ಯಾಪಕರಿಗೆ ನೇಮಕಾತಿ ಆದೇಶ ನೀಡುತ್ತಿಲ್ಲದಿರುವುದಕ್ಕೆ ಕಾರಣಗಳೇನು? | |

ಅದರಂತೆ, ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ದಿನಾಂಕ:01.02.2023 ರ ಸುತ್ತೋಲೆಯನ್ವಯ ಪರಿಷ್ಕೃತ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ದಿನಾಂಕ:17.02.2023 ರಂದು ಪ್ರಕಟಿಸಿ, ತದನಂತರ ದಿನಾಂಕ: 03.03.2023 ರಂದು 1208 ಅಭ್ಯರ್ಥಿಗಳ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಿರುತ್ತದೆ.

ಈ ಅಂತಿಮ ಆಯ್ಕೆ ಪಟ್ಟಿಯಿಂದ ಬಾಧಿತರಾದ ಅಭ್ಯರ್ಥಿಗಳು ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ಮೊರೆಹೋಗಿದ್ದು, ಮಾನ್ಯ ಆಡಳಿತ ನ್ಯಾಯ ಮಂಡಳಿಯು ದಿನಾಂಕ: 22.09.2023 ರಂದು ನೀಡಿದ ತೀರ್ಪಿನಲ್ಲಿ ಅರ್ಜಿದಾರರ ಕೋರಿಕೆಯನ್ನು ತಿರಸ್ಕರಿಸಿ ಅರ್ಜಿಗಳನ್ನು ವಜಾಗೊಳಿಸಿರುತ್ತದೆ.

ಸದರಿ ತೀರ್ಪನ್ನು ಪ್ರಶ್ನಿಸಿ, ಮಾನ್ಯ ರಾಜ್ಯ ಉಚ್ಛ ನ್ಯಾಯಾಲಯದಲ್ಲಿ ದಾಖಲಾಗಿದ್ದ WP No.1464/2024 ಹಾಗೂ ಇಂತಹುದೇ ಸಮನಾಂತರ ಪ್ರಕರಣಗಳಾದ WP No. 28614/2023, 3455/2024, 1633/2024, 2034/2024, 1900/2024, ಪ್ರಕರಣಗಳನ್ನು ಒಟ್ಟುಗೂಡಿಸಿ ದಿನಾಂಕ: 13/03/2024 ರಂದು ವಿಚಾರಣೆ ನಡೆಸಿದ ಸಂದರ್ಭದಲ್ಲಿ ಮಾನ್ಯ ರಾಜ್ಯ ಉಚ್ಛ ನ್ಯಾಯಾಲಯವು ಈ ಕೆಳಕಂಡಂತೆ ಮಧ್ಯಂತರ ಆದೇಶ ನೀಡಿರುತ್ತದೆ.

"Accordingly, the impugned order rendered by the KSAT in Application No.1512-1516/2023 vide Annexure-"B" is stayed. Further, the final selection list dated 03.03.2023 to the post of Assistant Professors vide Annexure-"A9" series is hereby stayed and the interim order of stay is confined to the petitioners only. It is clarified that the respondent / Authority shall not fill up the posts from which the petitioners have been displaced. However, the stay granted in this petition is subject to the result of this petition.

It is clarified that the state shall proceed with the counselling. However, the said counselling process shall be subject to the result of these petitions."

ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಆಯ್ಕೆ ಹೊಂದಿದ ಅಭ್ಯರ್ಥಿಗಳಿಗೆ ನೇಮಕಾತಿ ಪ್ರಾಧಿಕಾರವಾದ ಸರ್ಕಾರವು ನೇಮಕಾತಿ ಆದೇಶ ಹೊರಡಿಸಿದ ನಂತರ ಅವರುಗಳಿಗೆ ಇಲಾಖೆಯ ವರ್ಗಾವಣೆ ನಿಯಮಗಳು, 2021 ರ ನಿಯಮ 9(2) ರನ್ವಯ ಕೌನ್ಸಿಲಿಂಗ್ ಪ್ರಕ್ರಿಯೆ ನಡೆಸಿ, ಸ್ಥಳ ನಿಯುಕ್ತಿಗೊಳಿಸಬೇಕಾಗಿರುತ್ತದೆ. ಆದರೆ, ದಿನಾಂಕ:16.03.2024 ರಂದು ಲೋಕಸಭಾ ಚುನಾವಣೆ ಘೋಷಣೆಯ ಪ್ರಯುಕ್ತ ಚುನಾವಣಾ ನೀತಿಸಂಹಿತೆ ಜಾರಿಗೆ ಬಂದಿದ್ದರಿಂದ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ನಡೆಸಲು ಸಾಧ್ಯವಾಗಿರುವುದಿಲ್ಲ.

ಮುಂದುವರೆದು, ಮಾನ್ಯ ಉಚ್ಛ ನ್ಯಾಯಾಲಯವು ಮೇಲಿನ ಎಲ್ಲಾ ಪ್ರಕರಣಗಳನ್ನು WA1218/2023 ಪ್ರಕರಣದೊಂದಿಗೆ ಜೋಡಿಸಲಾಗಿದ್ದು, ಈ ಪ್ರಕರಣಗಳಲ್ಲಿ ಮಾನ್ಯ ನ್ಯಾಯಾಲಯವು ನೀಡುವ ತೀರ್ಪಿನನ್ವಯ ಕ್ರಮವಹಿಸಲಾಗುವುದು.

ಇಡಿ187 ಡಿಸಿಇ 2024(ಇ)

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು